ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:15-06-2022

# ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಆಯ್ಕೆಯಾಗಿರುವ ಅತಿಥಿ ಉಪನ್ಯಾಸಕರಿಗೆ ಕಾಲೇಜು ಬದಲಾವಣೆ ಮಾಡಿಕೊಳ್ಳಲು ಅವಕಾಶ ನೀಡುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅಗತ್ಯವಿರುವ ಅರ್ಹ ಅತಿಥಿ ಉಪನ್ಯಾಸಕರನ್ನು ಸರ್ಕಾರದ ಆದೇಶದ ಮೇರೆಗೆ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಅದರಂತೆ, ಇವರೆವಿಗೂ ನಡೆದ 5 ಸುತ್ತುಗಳ ಮತ್ತು ವಿಶೇಷ ಸುತ್ತಿನ ಕೌನ್ಸಿಲಿಂಗ್‌ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳು ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದು, ಕೆಲವು ಅತಿಥಿ ಉಪನ್ಯಾಸಕರು ತಮಗೆ ಕಾರ್ಯಭಾರದ ಕೊರತೆ ಉಂಟಾಗಿರುವುದೆಂದು ತಿಳಿಸಿ, ಕಾಲೇಜು ಬದಲಾವಣೆ ಕೋರಿ, ಮನವಿಗಳನ್ನು ಸಲ್ಲಿಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ, ಸ್ಥಳ/ಕಾಲೇಜು ಬದಲಾವಣೆ ಕೋರುವ ಅತಿಥಿ ಉಪನ್ಯಾಸಕರಿಗೆ ಒಂದು ಬಾರಿಯ ಕ್ರಮವಾಗಿ ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಲಭ್ಯವಿರುವ ಕಾರ್ಯಭಾರಕ್ಕೆ (ಇದುವರೆವಿಗೂ ನಡೆದ ಕೌನ್ಸಿಲಿಂಗ್‌ಗಳಲ್ಲಿ ವಿವಿಧ ವಿಷಯಗಳಲ್ಲಿ ಆಯ್ಕೆ ಮಾಡಿಕೊಳ್ಳದೆ ಉಳಿಕೆಯಾಗಿರುವ ಕಾರ್ಯಭಾರಕ್ಕೆ) ಆಯಾ ವಿಷಯದಲ್ಲಿನ ಮೆರಿಟ್ ಆಧಾರದ ಮೇಲೆ ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಆಯೋಜಿಸಲಾಗುವುದು.

- ಸ್ಥಳ/ಕಾಲೇಜು ಬದಲಾವಣೆ ಕೋರುವ ಅತಿಥಿ ಉಪನ್ಯಾಸಕರು ಈ ಸುತ್ತೋಲೆಗೆ ಲಗತ್ತಿಸಿರುವ ನಮೂನೆಯಲ್ಲಿ ಕೋರಿಕೆಯನ್ನು ಆಯಾ ಕಾಲೇಜುಗಳ ಪ್ರಾಂಶುಪಾಲರಿಗೆ ದಿನಾಂಕ:18.06.2022 ರೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಪ್ರತಿ ಅತಿಥಿ ಉಪನ್ಯಾಸಕರ ಕೋರಿಕೆ ಅರ್ಜಿಯನ್ನು ಪ್ರಾಂಶುಪಾಲರು E.M.I.S. ನಲ್ಲಿ ಸ್ವೀಕೃತಗೊಂಡ ದಿನದಂದೇ ನಮೂದಿಸುವುದು.

- ಈ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸುವ ಅತಿಥಿ ಉಪನ್ಯಾಸಕರು ತಮಗೆ ಅವಶ್ಯವಿದ್ದ ಸ್ಥಳ/ಕಾಲೇಜು ಲಭ್ಯ/ಆಯ್ಕೆಯಾಗದೆ ಇದ್ದಲ್ಲಿ, ಸದರಿ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾಲೇಜಿನಲ್ಲಿಯೇ ಮುಂದುವರೆಯಬಹುದಾಗಿದೆ.

..... 2

- ದಿನಾಂಕ:24.05.2022 ರಂದು ನಡೆದ ವಿಶೇಷ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಕಾಲೇಜನ್ನು ಆಯ್ಕೆ ಮಾಡಿಕೊಂಡು ಆ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಾರ್ಯಭಾರ ಕೊರತೆ / ಕಾರ್ಯಭಾರ ಇಲ್ಲದೆ ಹೊರಗುಳಿದಿರುವ ಅಭ್ಯರ್ಥಿಗಳು ಹಾಗೂ ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರನ್ನು ಒಳಗೊಂಡಂತೆ ಒಂದು ಕ್ರೋಢೀಕೃತ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಲಾಗುವುದು.

- ಕಾಲೇಜು ಬದಲಾವಣೆ ಬಯಸಿ ಅರ್ಜಿ ಸಲ್ಲಿಸುವ ಅತಿಥಿ ಉಪನ್ಯಾಸಕರು ಪ್ರಸ್ತುತ ಕೌನ್ಸಿಲಿಂಗ್‌ನಲ್ಲಿ ಬೇರೆ ಕಾಲೇಜು ಆಯ್ಕೆ ಮಾಡಿಕೊಂಡಲ್ಲಿ ಅಂತಹ ಅತಿಥಿ ಉಪನ್ಯಾಸಕರಿಂದ ಲಭ್ಯವಾಗುವ/ಉಳಿಕೆಯಾಗುವ ಕಾರ್ಯಭಾರವನ್ನು ನಂತರದ ಅಭ್ಯರ್ಥಿಗಳಿಗೆ ಪ್ರದರ್ಶಿಸಲಾಗುವುದು.

- ಮುಂದುವರೆದು, ಮೇಲಿನ ಪ್ರಕ್ರಿಯೆ ನಂತರ ಇನ್ನೂ ಉಳಿಕೆಯಾಗಲಿರುವ ಕಾರ್ಯಭಾರಕ್ಕೆ ಈಗಾಗಲೇ ಸಿದ್ಧಪಡಿಸಿರುವ ವಿಷಯವಾರು ರಾಜ್ಯವ್ಯಾಪಿ ತಾತ್ಕಾಲಿಕ ಆಯ್ಕೆಪಟ್ಟಿಯನ್ವಯ 6 ನೇ ಸುತ್ತಿನ ಕೌನ್ಸಿಲಿಂಗ್ ಅನ್ನು ನಡೆಸಲಾಗುವುದು.

15/06/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

<u>ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;</u>

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ

ಇಂದ: ------ ದಿನಾಂಕ: ------------

ಅತಿಥಿ ಉಪನ್ಯಾಸಕರು

--------------------------------- ಕಾಲೇಜು

-------------------------------------

ID No: ..........................................................

Subject: ........................................................

Mobile No.: ....................................................

ಇವರಿಗೆ:

ಪ್ರಾಂಶುಪಾಲರು

--------------------------------- ಕಾಲೇಜು

-------------------------------------

ಮಾನ್ಯರೆ,

**ಉಲ್ಲೇಖ:** 1. ಸುತ್ತೋಲೆ ಸಂಖ್ಯೆ ಕಾಶಿಇ/ನೇವಿ-1/ಅಉಆ/97/2021-22; ದಿನಾಂಕ:17.03.2022.

**ವಿಷಯ:** ಅತಿಥಿ ಉಪನ್ಯಾಸಕರಾಗಿ ಸ್ಥಳ/ ಕಾಲೇಜು ಬದಲಾವಣೆ ಕೋರುವ ಬಗ್ಗೆ

ನಾನು ದಿನಾಂಕ: ----------------- ರಂದು ನಡೆದ ಆನ್ ಲೈನ್ ಕೌನ್ಸಿಲಿಂಗ್ ನಲ್ಲಿ ಭಾಗವಹಿಸಿ ------------------------------------------------------ ಕಾಲೇಜನ್ನು ಆಯ್ಕೆ ಮಾಡಿಕೊಂಡು ದಿನಾಂಕ: ----------------ರಿಂದ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ.

ನಾನು ಸದ್ಯಕ್ಕೆ ಆಯ್ಕೆ ಮಾಡಿಕೊಂಡಿರುವ ಕಾಲೇಜಿಗೆ ಬದಲಾಗಿ ಕಾರ್ಯಭಾರ ಲಭ್ಯವಿರುವ ಇತರೆ ಸ್ಥಳ/ ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು ಇಚ್ಚಿಸಿದ್ದು ಉಲ್ಲೇಖ-1 ರಂತೆ ಸಂಬಂಧಿಸಿದ ಕೌನ್ಸಿಲಿಂಗ್ ನಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಡಬೇಕೆಂದು ಕೋರಿಕೊಳ್ಳುತ್ತೇನೆ.

(ಅತಿಥಿ ಉಪನ್ಯಾಸಕರ ಹೆಸರು ಮತ್ತು ಸಹಿ)